**ದಿನಾಂಕ: 18.09.2021 ರಂದು 11-00 ಕ್ಕೆ ಶ್ರೀ ಹೆಚ್. ನಾಗರಾಜಪ್ಪ, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-177 (ಜೆ.ಪಿ.ನಗರ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾಡ್-177ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್-19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| **ಅಧ್ಯಕ್ಷರು** | ನೋಡಲ್ ಅಧಿಕಾರಿ |
| **ಸದಸ್ಯ ಕಾರ್ಯದರ್ಶಿ** | ವಾರ್ಡ್ 177ರ ಸಹಾಯಕ ಅಭಿಯಂತರರು |
| **ಸದಸ್ಯರುಗಳು** | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| **ಸದಸ್ಯರುಗಳು** | ಬಿಡಬ್ಲ್ಯೂಎಸ್ಎಸ್‌ಬಿ ಅಭಿಯಂತರರು |
| **ಸದಸ್ಯರುಗಳು** | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| **ಸದಸ್ಯರುಗಳು** | ತೋಟಗಾರಿಕೆ ಅಧಿಕಾರಿ (Horti. Inspector) |
| **ಸದಸ್ಯರುಗಳು** | ಠಾಣಾಧಿಕಾರಿಗಳು, ನ್ಯಾಯ ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ |
| **ಸದಸ್ಯರುಗಳು** | ಕಂದಾಯ ಪರಿವೀಕ್ಷಕರು, ವಾರ್ಡ್ 177 |
| **ಸದಸ್ಯರುಗಳು** | ಅರಣ್ಯ ಸಂರಕ್ಷಣಾಧಿಕಾರಿಗಳು |

## :ನಡಾವಳಿಯ ವರದಿ:

- ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- ಸೌತ್ ಎಂಡ್ ಎ ಅಡ್ಡರಸ್ತೆಯಲ್ಲಿ ಅಪರಿಚಿತರು ವಾಹನ ಮನೆ ಮುಂದೆ ನಿಲುಗಡೆ ಮಾಡಿರುವುದಾಗಿ ವಾರ್ಡ್ ಸಭೆಯಲ್ಲಿ ದೂರು ಸಲ್ಲಿಸಿರುತ್ತಾರೆ.
- ಜೆ.ಪಿ.ನಗರ ವ್ಯಾಪ್ತಿಯ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಬೆಳೆದಿರುವ ಮರದ ಸಣ್ಣ ರೆಂಬೆ-ಕೊಂಬೆಗಳನ್ನು ಕತ್ತರಿಸುವಂತೆ ಅರಣ್ಯ ಇಲಾಖೆಗೆ ಸೂಚಿಸುವಂತೆ ಕೋರಲಾಯಿತು.
- ಜೆ.ಪಿ.ನಗರ ವ್ಯಾಪ್ತಿಯ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸೊಳ್ಳೆ ನಿಯಂತ್ರಣ ಔಷಧಿ ಸಿಂಪಡಣೆ ಮಾಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಕೋರಲಾಯಿತು.
- ಪ್ರತಿನಿತ್ಯ ಮನೆಯ ಕಸದ ವಿಂಗಡಣೆ, ಸಂಗ್ರಹಣೆ ಹಾಗೂ ವಿಲೇವಾರಿ ಮಾಡುವ ಬಗ್ಗೆ ಚರ್ಚಿಸಲಾಯಿತು.

ಪು.ತಿ.ನೋ

- ಜೆ.ಪಿ.ನಗರ ವ್ಯಾಪ್ತಿಯ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ಚರಂಡಿಗಳಲ್ಲಿ ಹೂಳೆತ್ತುವ ಕಾರ್ಯಕ್ರಮವನ್ನು ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಚರ್ಚಿಸಲಾಯಿತು.
- ಜೆ.ಪಿ.ನಗರ ವ್ಯಾಪ್ತಿಯ ಸುತ್ತ ಮುತ್ತಲಿನ ಪ್ರದೇಶಗಳ ಬೀದಿ ದೀಪಗಳನ್ನು ನಿರ್ವಹಣೆ ಮಾಡುವ ಬಗ್ಗೆ ಚರ್ಚಿಸಲಾಯಿತು.
- ಬಿಬಿಎಂಪಿ ಪೌರಕಾರ್ಮಿಕರು ಹಾಗೂ ಅಧಿಕಾರಿಗಳಿಗೆ ಕಾಲ ಕಾಲಕ್ಕೆ ಆರೋಗ್ಯ ತಪಾಸಣೆಯನ್ನು ಹಮ್ಮಿಕೊಳ್ಳುವುದರ ಬಗ್ಗೆ ಚರ್ಚಿಸಲಾಯಿತು.
- ಖಾಲಿ ನಿವೇಶನಗಳನ್ನು ಸಂಬಂಧಪಟ್ಟ ಇಲಾಖೆಯಿಂದ ಸ್ವಚ್ಛಗೊಳಿಸುವುದರ ಬಗ್ಗೆ ಚರ್ಚಿಸಲಾಯಿತು.
- ಕಟ್ಟಡ ಕಾಮಗಾರಿಯನ್ನು ಮಾಡುವವರು ಪಾದಚಾರಿ ಮಾರ್ಗದ ಮೇಲೆ ಹಾಗೂ ರಸ್ತೆಬದಿಯಲ್ಲಿ ಹಾಕಿರುವ ಡೇಬ್ರಿಸ್‌ಅನ್ನು ತೆರವುಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲು ಚರ್ಚಿಸಲಾಯಿತು.
- ಜೆ.ಪಿ.ನಗರ ವ್ಯಾಪ್ತಿಗೆ ಬರುವ ಬೃಹತ್ ನೀರುಗಾಲುವೆಯ ನಿರ್ವಹಣೆ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 11.00 ಘಂಟೆಗೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಸಕಾಲದಲ್ಲಿ ಹಾಜರಾಗುವಂತೆ ಹಾಗೂ ಈ ಸಭೆಯಲ್ಲಿ ತಿಳಿಸಿರುವ ಸಮಸ್ಯೆಗಳನ್ನು ಬಗೆಹರಿಸಲು ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.

  - ಸದಸ್ಯ ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರವರು ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Nagaraj. H.

ಸದಸ್ಯ ಕಾರ್ಯದರ್ಶಿ
ಹಾಗೂ ಕಿರಿಯ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು
ವಾರ್ಡ್ ಸಮಿತಿ, ವಾರ್ಡ್ ನಂ. 177
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ